ಓ.ಎಸ್ 52/2019

ಪಿ ಡಬ್ಲ್ಯೂ-2

ಸಾಕ್ಷಿದಾರರನ್ನು ಕರೆಯಿಸಿ, ಪ್ರಮಾಣವಚನ ಬೋಧಿಸಲಾಯಿತು.

ದಿನಾಂಕಃ 24.05.2023

ಮುಖ್ಯ ವಿಚಾರಣೆಃ ಶ್ರೀ ಎಂ ವಿ ಹೆಚ್ ವಾದಿ ಪರ ವಕೀಲರಿಂದ

**ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಿಕೆಯನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಸಂಗತಿಗಳು ಸತ್ಯವಾಗಿರುತ್ತದೆ. ಅವುಗಳನ್ನು ನಾನೇ ಹೇಳಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಇರುತ್ತದೆ.**

ಸಾಕ್ಷಿಗೆ ದಿನಾಂಕ 24.08.2016 ರಂದು ನೊಂದಾಯಿತವಾದ ಕ್ರಯದ ಕರಾರು ಪತ್ರವನ್ನು ತೋರಿಸಲಾಗಿ ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 1(ಡಿ) ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯು ನನ್ನ ಸಮಕ್ಷಮ ನಿ ಪಿ 1 ಕ್ಕೆ ವಾದಿ ಮತ್ತು ಪ್ರತಿವಾದಿಯರು ಸಹಿಯನ್ನು ಮಾಡಿರುತ್ತಾರೆ. ವಾದಿ ಮತ್ತು ಪ್ರತಿವಾದಿಯರ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ನಿ ಪಿ1(ಎ) ಮತ್ತು 1(ಬಿ) ಎಂದು ಗುರುತಿಸಲಾಗಿದೆ. ನಿ ಪಿ 1 ನ್ನು ಬಿ ಆರ್ ಶಿವಾನಂದಮೂರ್ತಿಯವರು ಬರೆದಿರುತ್ತಾರೆ. ಸಾಕ್ಷಿಯು ಪತ್ರ ಬರಹಗಾರರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 1(ಎಫ್) ಎಂದು ಗುರುತಿಸಲಾಗಿರುತ್ತದೆ. ನಿ ಪಿ 1 ಕ್ಕೆ ನನ್ನ ಜೊತೆ ಬಸವರಾಜು ಅವರು ಸಹಿಯನ್ನು ಮಾಡಿರುತ್ತಾರೆ. ಬಸವರಾಜು ಅವರ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 1(ಈ) ಎಂದು ಗುರುತಿಸಲಾಗಿರುತ್ತದೆ.

**ಪಾಟೀ ಸವಾಲು ಃ- ಪಾಟೀ ಸವಾಲು ಮಾಡಲು ಸಮಯ ಕೋರಿದ್ದು ನೀಡಲಾಯಿತು.**

(ಮುಕ್ತ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಸ.ಇ.ಎ.ಒ.,

ಸಹಿ/-

3 ನೇ ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ಚನ್ನರಾಯಪಟ್ಟಣ.